# ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ರವರ ನ್ಯಾಯಾಲಯ, ತಿಪಟೂರು

**C.C. No. 604/2019**

**PW-1**

ದಿಃ **08.06.2026** ರಂದು ಸಾಕ್ಷಿಯನ್ನು ಪುನಃ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

ಮುಂದುವರೆದ ಮುಖ್ಯ ವಿಚಾರಣೆ ಪಿರ್ಯಾದುದಾರರ ಪರ ಶ್ರೀ ಬಿ.ಎಂ ವಕೀಲರಿಂದ **:-**

ನಾನು ಹಾಜರು ಪಡಿಸಿರುವ ದಾಖಲೆಗಳನ್ನು ನೋಡುತ್ತಿದ್ದು ಅವುಗಳಲ್ಲಿ ಆರೋಪಿ ನನಗೆ ಕೊಟ್ಟ ಚೆಕ್ ನ್ನು ನಿಪಿ-1 ಎಂದು, ಆರೋಪಿಯ ಸಹಿಯನ್ನು ನಿಪಿ-1(ಎ) ಎಂದು, ಬ್ಯಾಂಕಿನ ಹಿಂಬರಹವನ್ನು ನಿಪಿ-2 ಎಂದು, ನಾನು ವಕೀಲರ ಮುಖಾಂತರ ಆರೋಪಿಗೆ ಕಳುಹಿಸಿಕೊಟ್ಟ ನೋಟೀಸಿನ ಕಛೇರಿ ಪ್ರತಿಯನ್ನು ನಿಪಿ-3 ಎಂದು, ಆರ್.ಪಿ.ಎ.ಡಿ ರಸೀದಿಯನ್ನು ನಿಪಿ-4 ಎಂದು, ಅಂಚೆ ಸ್ವೀಕೃತಿಯನ್ನು ನಿಪಿ-5 ಎಂದು ಹಾಗೂ ಅದರಲ್ಲಿರುವ ಆರೋಪಿಯ ಸಹಿಯನ್ನು ನಿಪಿ-5(ಎ) ಎಂದು ಗುರುತಿಸಲಾಯಿತು.

ಆದ್ದರಿಂದ ಆರೋಪಿಯ ವಿರುದ್ಧ ಕಾನೂನು ಕ್ರಮಕ್ಕಾಗಿ ಪ್ರಾರ್ಥಿಸುತ್ತೇನೆ.

ಆರೋಪಿ ಪರ ವಕೀಲರ ಕೋರಿಕೆ ಮೇರೆಗೆ ಪಾಟೀ ಸವಾಲನ್ನು ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕರಿಸಿ ಓದಿ ಹೇಳಿ, ಕೇಳಿದಾಗ ಸರಿ ಇದೆ ಎಂದು ಒಪ್ಪಿರುತ್ತಾರೆ.)

ಹಿರಿಯ ಸಿವಿಲ್ ನ್ಯಾಯಾಧೀಶರು
ತಿಪಟೂರು.